ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ,
ಸಂಚಾರ ಇಲಾಖೆ, ಕೇಂದ್ರ ಕಛೇರಿ,
ಸೂಪರ ಮಾರ್ಕೆಟ್ ರೋಡ್,
ಕಲಬುರಗಿ-585102

KALYANA KARNATAKA ROAD TRANSPORT CORPORATION.
Traffic Department, Central Office,
Super Market Road, Kalaburagi-585102.
E-mail:ctmnekrtcglb@gmail.com

ಸಂ.ಕಕರಸಾ:ಕೇಕ:ಸಂ:ಕಾ-2: 2556 :23-24

ದಿನಾಂಕ:11.11.2023

ವಿಭಾಗೀಯ ನಿಯಂತ್ರಣಾಧಿಕಾರಿಗಳು,
ಕ.ಕ.ರ.ಸಾ.ನಿಗಮ,
ಕಲಬುರಗಿ ವಿಭಾಗ-1/ವಿಭಾಗ-2/ಬೀದರ/ಯಾದಗಿರ/
ರಾಯಚೂರು/ಕೊಪ್ಪಳ/ಬಳ್ಳಾರಿ/ಹೊಸಪೇಟೆ/ವಿಜಯಪುರ.

ಮಾನ್ಯರೇ,

ವಿಷಯ: ಮಹಿಳೆಯರಿಗೆ ಉಚಿತವಾಗಿ ಪ್ರಯಾಣಿಸುವ "ಶಕ್ತಿ ಯೋಜನೆ"ಯ ಪರಿಣಾಮಕಾರಿ ಜಾರಿಯ ಕುರಿತು.

ಉಲ್ಲೇಖ: 1.ಟಿಡಿ 18 ಟಿಸಿಕ್ಯು 2023 ದಿನಾಂಕ:05.06.2023
2.ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ: 179 ದಿನಾಂಕ: 07.06.2023.
3.ಸಂ/ಕಕರಸಾ/ಕೇಕ/ಸಂ/910/23-24 ದಿನಾಂಕ: 12.06.2023
4.ಸಂ/ಕರಾಸಾ/ಕೇಕ/ಸಂ/ಸಾ/ಎಸ್.ವೈ-4/2849/23-24 ದಿನಾಂಕ: 03.11.2023

• • • •

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರವು "ಶಕ್ತಿ ಯೋಜನೆ"ಯಡಿ ರಾಜ್ಯದ ಎಲ್ಲಾ ಮಹಿಳಾ ಪ್ರಯಾಣಿಕರಿಗೆ ನಿಗಮದ ವಾಹನಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ: 179 ದಿನಾಂಕ: 07.06.2023 ರಲ್ಲಿ ಅವಕಾಶವನ್ನು ಕಲ್ಪಿಸಿದ್ದು ಹಾಗೂ ಮುಂದುವರೆದ ಉಲ್ಲೇಖಿತ ಪತ್ರ-3ರ ತಿದ್ದುಪಡಿ ಆದೇಶದಲ್ಲಿ ಸದರಿ ಉಚಿತ ಪ್ರಯಾಣಕ್ಕಾಗಿ ಮಹಿಳಾ ಪ್ರಯಾಣಿಕರು ಮೂಲ/ನಕಲು/ಡಿಜಿಲಾಕರ್ (Digilocker) ಹಾರ್ಡ್ ಮತ್ತು ಸಾಫ್ಟ್ ಕಾಪಿ) ಮಾದರಿಯಲ್ಲಿ ತೋರಿಸಿದಲ್ಲಿ/ಹಾಜರುಪಡಿಸಿದಲ್ಲಿ ಪ್ರಯಾಣಕ್ಕೆ ಅವಕಾಶ ಕಲ್ಪಿಸಲು ತಿಳಿಸಲಾಗಿರುತ್ತದೆ.

ಆದಾಗ್ಯೂ ಸಹ ಮಹಿಳಾ ಪ್ರಯಾಣಿಕರು ಮೊಬೈಲ್‌ನಲ್ಲಿ ಅಧಿಕೃತ ಗುರುತಿನ ಚೀಟಿ ತೋರಿಸಿದಾಗ್ಯೂ ಸಹ ಮೊಬೈಲ್‌ನಲ್ಲಿನ ಗುರುತಿನ ಚೀಟಿ ನಡೆಯುವುದಿಲ್ಲ ಎಂದು ಕೆಲವು ನಿರ್ವಾಹಕರು ಅನಾವಶ್ಯಕವಾಗಿ ಮಹಿಳಾ ಪ್ರಯಾಣಿಕರಿಗೆ ತೊಂದರೆಯುಂಟು ಮಾಡುತ್ತಿರುವ ಬಗ್ಗೆ ಪದೇ ಪದೇ ದೂರುಗಳು ಕೇಳಿ ಬರುತ್ತಿರುವುದಾಗಿ, ಈ ಹಿನ್ನೆಲೆಯಲ್ಲಿ ಮಹಿಳಾ ಪ್ರಯಾಣಿಕರು ಮೊಬೈಲ್ ನಲ್ಲಿ ಉಲ್ಲೇಖಿತ ಆದೇಶಗಳಲ್ಲಿ ತಿಳಿಸಿರುವಂತೆ ತೋರಿಸುವ ಯಾವುದಾದರೂ ಒಂದು ಅಧಿಕೃತ ಗುರುತಿನ ಚೀಟಿಯನ್ನು ಪರಿಗಣಿಸಿ ಶೂನ್ಯ ಮೊತ್ತದ ಮಹಿಳಾ ಟಿಕೆಟ್ ವಿತರಿಸಲು ಮತ್ತೊಮ್ಮೆ ಎಲ್ಲಾ ನಿರ್ವಾಹಕರಿಗೆ ತಿಳುವಳಿಕೆ ನೀಡಲು ಹಾಗೂ ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣಕ್ಕೆ ಅಡಚಣೆಯಾಗದಂತೆ ಹಾಗೂ ದೂರುಗಳಿಗೆ ಆಸ್ಪದ ನೀಡದಂತೆ ಕ್ರಮ ವಹಿಸುವಂತೆ ಉಲ್ಲೇಖ-4 ರ ಪತ್ರದಲ್ಲಿ ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ), ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರು ತಿಳಿಸಿರುತ್ತಾರೆ.

ಈ ಸಂಬಂಧ, ಉಲ್ಲೇಖಿತ ಆದೇಶಗಳಲ್ಲಿ ತಿಳಿಸಿರುವಂತೆ ಮಹಿಳಾ ಪ್ರಯಾಣಿಕರು ಮೊಬೈಲ್ ನಲ್ಲಿ ತೋರಿಸುವ ಯಾವುದಾದರೂ ಒಂದು ಅಧಿಕೃತ ಗುರುತಿನ ಚೀಟಿಯನ್ನು ಪರಿಗಣಿಸಿ, ಶೂನ್ಯ ಮೊತ್ತದ ಮಹಿಳಾ ಟಿಕೆಟ್ ವಿತರಿಸಲು ಮತ್ತೊಮ್ಮೆ ಎಲ್ಲಾ ನಿರ್ವಾಹಕರಿಗೆ ಸೂಕ್ತ ತಿಳುವಳಿಕೆ ನೀಡಲು ಹಾಗೂ ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣಕ್ಕೆ ಅಡಚಣೆಯಾಗದಂತೆ ಹಾಗೂ ದೂರುಗಳಿಗೆ ಆಸ್ಪದ ನೀಡದಂತೆ ಅಗತ್ಯ ಕ್ರಮ ಕೈಗೊಳ್ಳಲು ಈ ಮೂಲಕ ಸೂಚಿಸಲಾಗಿದೆ. ಈ ಬಗ್ಗೆ ದೂರುಗಳು ಸ್ವೀಕೃತಗೊಂಡಲ್ಲಿ ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳುವುದು.

ತಮ್ಮ ವಿಶ್ವಾಸಿ,

11/11/23

ಮುಖ್ಯ ಸಂಚಾರ ವ್ಯವಸ್ಥಾಪಕರು